ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001
ದೂರವಾಣಿ ಸಂಖ್ಯೆ:080-22342163, E-mail: karnregs@gmail.com

ಸಂಖ್ಯೆ: ಗ್ರಾಅಪ:483:ಉಖಾಯೋ:2017 ದಿನಾಂಕ:12.09.2017

## ಪತ್ರಿಕಾ ಪ್ರಕಟಣೆ

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನದ ಸಂಬಂಧದಲ್ಲಿ ಕಂಡು ಬರುವ ಕುಂದುಕೊರತೆಗಳ ನಿವಾರಣೆ ಮತ್ತು ದೂರುಗಳ ವಿಲೇವಾರಿಗಾಗಿ ಈ ಕೆಳಕಂಡ ಜಿಲ್ಲೆಗಳಿಗೆ ಒಂಬುಡ್ಸ್‌ಮನ್‌ರವರನ್ನು ಆಯ್ಕೆ ಮೂಲಕ ನೇಮಕ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಗಳ ಹೆಸರು: **ಬೀದರ್, ಕೋಲಾರ, ಮಂಡ್ಯ, ಚಿತ್ರದುರ್ಗ, ಬೆಂಗಳೂರು (ಗ್ರಾ)/(ನಗರ), ಹಾಸನ/ ಕೊಡಗು.**

ಈ ಕೆಳಕಂಡ ಯಾವುದಾದರೊಂದು ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳ ಸೇವಾನುಭವ ಹೊಂದಿರಬೇಕಾಗಿರುತ್ತದೆ.

ಅ) ಸಾರ್ವಜನಿಕ ಆಡಳಿತ
ಆ) ಕಾನೂನು
ಇ) ಶೈಕ್ಷಣಿಕ ಕ್ಷೇತ್ರ
ಈ) ಸಮಾಜ ಸೇವೆ/ಮ್ಯಾನೇಜ್‌ಮೆಂಟ್

1. ಸಾರ್ವಜನಿಕರೊಂದಿಗೆ/ಸಮುದಾಯದ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸಿದ ಅನುಭವವು ಒಂದು ಕಡ್ಡಾಯ ಅರ್ಹತೆಯಾಗಿರುತ್ತದೆ.
2. ಅರ್ಜಿ ಸಲ್ಲಿಸುವವರು ಯಾವುದೇ ರಾಜಕೀಯ ಪಕ್ಷದ ಮತ್ತು ನಿಷೇಧಿತ ಸಂಘ ಸಂಸ್ಥೆಗಳ ಸದಸ್ಯರಾಗಿರಬಾರದು.
3. ತಪಾಸಣೆ, ಕ್ಷೇತ್ರ ಭೇಟಿ, ವೀಕ್ಷಣೆ ಕೆಲಸಗಳಿಗೆ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಪ್ರವಾಸ ಕೈಗೊಳ್ಳಲು ಸಮರ್ಥರಾಗಿರಬೇಕು.
4. ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಗರಿಷ್ಟ ವಯಸ್ಸು 66 ವರ್ಷಗಳನ್ನು ಮೀರಿರಬಾರದು.
5. ನೇಮಕಾತಿಯು ಮೊದಲಿಗೆ 2 ವರ್ಷಗಳ ಅವಧಿಯದಾಗಿರುತ್ತದೆ. ಆದರೆ ಕಾರ್ಯನಿರ್ವಹಣೆಯು ಅತೃಪ್ತಿಕರವಾಗಿ ಕಂಡು ಬಂದಲ್ಲಿ ಅವಧಿಗೆ ಮುನ್ನವೇ ಹುದ್ದೆಯಿಂದ ಬಿಡುಗಡೆ ಮಾಡಲಾಗುವುದು.
6. ಕೇಂದ್ರ/ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳ ಅನುಸಾರ ಸಂಭಾವನೆ, ಸಿಟ್ಟಿಂಗ್ ಫೀಜು ನೀಡಲಾಗುವುದು. ಪ್ರಸ್ತುತ ಮಾಸಿಕ ರೂ. 10000/- ಗೌರವಧನ ಹಾಗೂ ಗರಿಷ್ಠ ರೂ.20000/ ಮಿತಿಗೊಳಪಟ್ಟಂತೆ ಪ್ರತಿ ಸಿಟ್ಟಿಂಗ್‌ಗೆ ರೂ.1000/-ದಂತೆ ಸಿಟ್ಟಿಂಗ್ ಫೀಜು ನೀಡಲಾಗುತ್ತಿದೆ.

ಜಿಲ್ಲಾ ಮಟ್ಟದಲ್ಲಿ ಒಂಬುಡ್ಸ್‌ಮನ್‌ಗಳಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು ಇಲಾಖೆಯ ವೆಬ್‌ಸೈಟ್ **www.karnregs.kar.nic.in** ನಲ್ಲಿ ನಿಗಧಿತ ಅರ್ಜಿನಮೂನೆಯನ್ನು ಅವರೋಹಣ (download) ಮಾಡಿಕೊಂಡು, ತಮ್ಮ ವ್ಯಕ್ತಿತ್ವ ಪರಿಚಯದ, ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಣೆ ಅನುಭವದ ದಾಖಲೆ ಹಾಗೂ ಇತರೆ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿಯು **ದಿನಾಂಕ: 21.10.2017** ರೊಳಗೆ ತಲುಪುವಂತೆ ಖುದ್ದಾಗಿ/ಅಂಚೆ ಮೂಲಕ ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, 3ನೇ ಹಂತ, 2ನೇ ಮಹಡಿ, ಡಾ॥ಅಂಬೇಡ್ಕರ್ ವೀದಿ, ಬೆಂಗಳೂರು-560001 ಇವರಿಗೆ ಸಲ್ಲಿಸಬಹುದಾಗಿದೆ. ನಿಗಧಿತ ದಿನಾಂಕದ ನಂತರ ಸ್ವೀಕೃತವಾಗುವ ಅಥವಾ ಅಪೂರ್ಣ ಮಾಹಿತಿ ಹೊಂದಿರುವ ಅರ್ಜಿಗಳು ಪರಿಗಣಿಸಲ್ಪಡುವುದಿಲ್ಲ. (ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. (ದೂರವಾಣಿಸಂಖ್ಯೆ:080-22342163).

ಆಯುಕ್ತರು ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

## ಒಂಬುಡ್ಸ್‌ಮನ್ ನೇಮಕಾತಿಯ ಅರ್ಜಿ ನಮೂನೆ:

| | | |
|---|---|---|
| 1 | ವೈಯಕ್ತಿಕ ಮಾಹಿತಿ ವಿವರ : | |
| 1.1 | ಹೆಸರು : | |
| 1.2 | ವಯಸ್ಸು : ( 12.09.2017 ದಿನಾಂಕದಂದು)<br>(ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು) | |
| 1.3 | ಅಂಚೆ ವಿಳಾಸ ಅಥವಾ ಪತ್ರ ವ್ಯವಹಾರದ ವಿಳಾಸ: | |
| 1.4 | ದೂರವಾಣಿ/ಮೊಬೈಲ್ ಸಂಖ್ಯೆ/ಇ-ಮೇಲ್ ಐಡಿ: | |
| 1.5 | ಖಾಯಂ ವಿಳಾಸ :<br>(ವಾಸಸ್ಥಳದ ರುಜುವಾತು ದಾಖಲಾತಿಯನ್ನು ಲಗತ್ತಿಸುವುದು) | |
| 1.6 | ನೀವು ವೈದ್ಯಕೀಯವಾಗಿ (ದೈಹಿಕವಾಗಿ & ಮಾನಸಿಕವಾಗಿ) ಕ್ಷೇತ್ರಗಳ ಭೇಟಿ ನಡೆಸಲು ಧೃಢಕಾಯರಾಗಿರುವಿರಾ? (ಧೃಢೀಕೃತ ವೈದ್ಯಕೀಯ ಪ್ರಮಾಣ ಪತ್ರ ಲಗತ್ತಿಸುವುದು) | |
| 1.7 | ರಾಜಕೀಯ ಪಕ್ಷದ ಸದಸ್ಯರೇ ?<br>(ಪಬ್ಲಿಕ್ ನೋಟರಿಯಿಂದ ಧೃಢೀಕರಿಸಿದ ವೈಯಕ್ತಿಕ ಪ್ರಮಾಣ ಪತ್ರವನ್ನು ಲಗತ್ತಿಸುವುದು.) | |
| 1.8 | ಅ) ಕ್ರಿಮಿನಲ್ ಪ್ರಕರಣದಲ್ಲಿ ಶಿಕ್ಷೆಗೊಳಗಾಗಿದ್ದೀರಾ/ಆರೋಪ ಪಟ್ಟಿ ದಾಖಲಾಗಿದೆಯೇ ?<br>ಆ) ಇಲಾಖಾ ವಿಚಾರಣೆಯಲ್ಲಿ ದಂಡನೆಗೆ ಒಳಪಟ್ಟಿರುವಿರೇ?/ಯಾವುದೇ ಇಲಾಖಾ ವಿಚಾರಣೆ ಬಾಕಿ ಇದೆಯೇ?<br>(ಪಬ್ಲಿಕ್ ನೋಟರಿಯಿಂದ ಧೃಢೀಕರಿಸಿದ ವೈಯಕ್ತಿಕ ಘೋಷಣಾ ಪ್ರಮಾಣ ಪತ್ರವನ್ನು ಸಲ್ಲಿಸುವುದು) | |
| 1.9 | ಯಾವುದೇ ಸಾಮರ್ಥ್ಯದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಹೊಣೆಗಾರಿಕೆ ಹೊಂದಿರುವಿರಾ? | |
| 2 | ವೃತ್ತಿ ಪರ ಮಾಹಿತಿ ವಿವರ : | |
| 2.1 | ಉನ್ನತ ವಿದ್ಯಾರ್ಹತೆ :<br>(ಕನಿಷ್ಠ ವಿದ್ಯಾರ್ಹತೆ: ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವೀಧರರಾಗಿರತಕ್ಕದ್ದು)<br>(ಸ್ವಯಂ ಧೃಢೀಕರಿಸಿದ ಅಧಿಕೃತ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| 2.2 | ಎಷ್ಟು ವರ್ಷಗಳ ಕೆಲಸದ ಅನುಭವವಿದೆ :<br>(ಸ್ವಯಂ ಧೃಢೀಕರಿಸಿದ ಅಧಿಕೃತ ಪ್ರಮಾಣ ಪತ್ರವನ್ನು ಲಗತ್ತಿಸುವುದು). | |
| 2.3 | ಕ್ಷೇತ್ರ ಮಟ್ಟದ ಅನುಭವ:<br>ಈ ಕೆಳಕಂಡ ಯಾವುದಾದರು ಒಂದು ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿರುವ ಅನುಭವ ಇರತಕ್ಕದ್ದು. ಈ ಕುರಿತು ವಿವರವಾದ ಟಿಪ್ಪಣಿ ಹಾಗೂ ಕಾರ್ಯನಿರ್ವಹಿಸಿದ ಅನುಭವಕ್ಕೆ ಸಂಭಂಧಿಸಿದ ದೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸುವುದು.<br>(ಅ) ಸಾರ್ವಜನಿಕ ಆಡಳಿತ<br>(ಆ) ಕಾನೂನು<br>(ಇ) ಶೈಕ್ಷಣಿಕ ಕ್ಷೇತ್ರ<br>(ಈ) ಸಮಾಜ ಸೇವೆ /ಮ್ಯಾನೇಜ್‌ಮೆಂಟ್ | |
| 2.4 | ಈ ಹಿಂದೆ ಕಾರ್ಯನಿರ್ವಹಿಸಿದ್ದ ಗರಿಷ್ಠ ಹುದ್ದೆ/ಸ್ಥಾನ : | |
| 2.5 | ಯಾವುದಾದರೂ ಸೊಸೈಟಿ/ವೃತ್ತಿಕಾಯ ಸಂಸ್ಥೆಯ ಸದಸ್ಯರೇ? ಇದ್ದಲ್ಲಿ ವಿವರಗಳನ್ನು ನೀಡುವುದು : | |
| 2.6 | ನೇಮಕಾತಿ ಬಯಸುವ ಜಿಲ್ಲೆ: ಆದ್ಯತೆ ಮೇರೆಗೆ | 1) 2) 3) 4) 5) 6) |
| 3 | ಸ್ವಯಂ ಘೋಷಣೆ: | |

ಮೇಲೆ ಸಲ್ಲಿಸಿರುವ ಮಾಹಿತಿಯು ಸರಿಯಾಗಿದೆಯೆಂದು ಹಾಗೂ ಅಧಿನಿಯಮದ ಪರಿಮಿತಿಯೊಳಗೆ ಮಹಾತ್ಮಗಾಂದಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ಕಾರ್ಯಾಚರಣೆ ಮಾರ್ಗಸೂಚಿಗಳನ್ವಯ ರೂಪಿಸಿರುವ ಎಲ್ಲಾ ಪ್ರಕಾರ್ಯಗಳನ್ನು ಹಾಗೂ ಒಂಬುಡ್ಸಮನ್ ಕುರಿತು ಜಾಹಿರಾತು ಮೂಲಕ ನೀಡಿರುವ ಸೂಚನೆಗಳನ್ನು ಮತ್ತು ಒಂಬುಡ್ಸಮನ್ ಹುದ್ದೆಯು ಅರೆಕಾಲಿಕ ಹುದ್ದೆಯಾಗಿರುವುದನ್ನು ಪೂರ್ಣವಾಗಿ ಅರ್ಥೈಸಿಕೊಂಡಿರುವೆನೆಂದು ಈ ಮೂಲಕ ಘೋಷಿಸಿರುತ್ತೇನೆ.

ಸ್ಥಳ:

ದಿನಾಂಕ: ಅರ್ಜಿದಾರರ ಹೆಸರು ಮತ್ತು ಸಹಿ: